ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಪ್ರವಾಸ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ    ದಿನಾಂಕ : DATE : 24/06/2021

## ಏರ್‌ಪೋರ್ಟ್ ಬಳಿ ಕೆಂಪೇಗೌಡ ಪ್ರತಿಮೆ

**ಬೆಂಗಳೂರು:** ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಮುಂಭಾಗದ 23 ಎಕರೆ ಪ್ರದೇಶದಲ್ಲಿ ಸ್ಥಾಪನೆಯಾಗಲಿರುವ 108 ಅಡಿ ಎತ್ತರದ ನಾಡಪ್ರಭು ಕೆಂಪೇಗೌಡರ ಭವ್ಯ ಪ್ರತಿಮೆ ಹಾಗೂ ಸೆಂಟ್ರಲ್ ಪಾರ್ಕ್ ನಿರ್ಮಾಣಕ್ಕೆ 27ರಂದು ಶಿಲಾನ್ಯಾಸ ನಡೆಯಲಿದೆ. ಉಪ ಮುಖ್ಯಮಂತ್ರಿ ಡಾ. ಸಿ.ಎನ್. ಅಶ್ವತ್ಥನಾರಾಯಣ ಮಂಗಳವಾರ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಗೊಂದಲ ಇಲ್ಲದೆ ಸರಳವಾಗಿ, ಅರ್ಥಪೂರ್ಣವಾಗಿ ಕಾರ್ಯಕ್ರಮ ನಡೆಯಬೇಕು. ಕರೊನಾ ಕಾರಣ ಹೆಚ್ಚುಜನ ಸೇರಲು ಅವಕಾಶ ನೀಡಬಾರದು ಎಂದು ಅಧಿಕಾರಿಗಳಿಗೆ ಸೂಚಿಸಿದರು. ಇಡೀ ದೇಶದಲ್ಲಿಯೇ ಇದೊಂದು ಅಪರೂಪದ ಸ್ಮಾರಕವಾಗಲಿದೆ. ದೇಶ, ವಿದೇಶಗಳಿಂದ ಬರುವ ಪ್ರವಾಸಿಗರಿಗೆ ನಮ್ಮ ರಾಜ್ಯದ ಭವ್ಯ ಪರಂಪರೆ ಸಾರಿ ಹೇಳುವ ರೀತಿಯಲ್ಲಿ ಇರುತ್ತದೆ ಎಂದರು.

» **27ರಂದು ಶಿಲಾನ್ಯಾಸ**